ಕರ್ನಾಟಕ ಪರೀಕ್ಷಾ ಪ್ರಾಧಿಕಾರ
KARNATAKA EXAMINATIONS AUTHORITY

ಸಂಖ್ಯೆ:ED/KEA/ADMN/54/2016-17 ದಿನಾಂಕ: 03.06.2017

## ಅಧಿಸೂಚನೆ

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗಳಿಗೆ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ದಿನಾಂಕ 8.5.2015ರಂದು ಅಧಿಸೂಚನೆಯನ್ನು ಹೊರಡಿಸಿ ದಿನಾಂಕ 15-06-2015ರ ವರೆಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವಂತೆ ಮತ್ತು ದಿನಾಂಕ 17-06-2015ರವರೆಗೆ ಶುಲ್ಕ ಪಾವತಿಸಲು ಸೂಚಿಸಲಾಗಿತ್ತು. ಆದರೆ ಅನಿವಾರ್ಯ ಕಾರಣಗಳಿಂದ ದಿನಾಂಕ 15-06-2015ರಂದೇ ಸದರಿ ಅಧಿಸೂಚನೆಯನ್ನು ಸ್ಥಗಿತಗೊಳಿಸಿ, ದಿನಾಂಕ 16-07-2015 ಮತ್ತು 17-07-2015ರಂದು ಶುಲ್ಕ ಪಾವತಿಸುವ ಅಭ್ಯರ್ಥಿಗಳಿಗೆ ಶುಲ್ಕ ಪಾವತಿಸಲು ಅವಕಾಶ ನೀಡಲಾಗಿರಲಿಲ್ಲ.

ಆದ್ದರಿಂದ ಪರೀಕ್ಷಾ ಪ್ರಾಧಿಕಾರವು ಒಟ್ಟು 1204 ಪದವಿ ಪೂರ್ವ ಉಪನ್ಯಾಸಕರ ಹುದ್ದೆಗಳಿಗೆ ಮತ್ತೊಮ್ಮೆ ದಿನಾಂಕ 2.3.2017ರಂದು ಅಧಿಸೂಚನೆಯನ್ನು ಹೊರಡಿಸಿ, ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದ್ದು, ಈಗಾಗಲೇ ಅರ್ಜಿ ಹಾಕಿರುವ ಅಭ್ಯರ್ಥಿಗಳು ಮತ್ತೆ ಅರ್ಜಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲವೆಂದು ಸೂಚಿಸಲಾಗಿತ್ತು.

ಆದರೆ ಈಗಾಗಲೇ ದಿನಾಂಕ 8-05-2015ರ ಅಧಿಸೂಚನೆಯಂತೆ ದಿನಾಂಕ 15.06.2015ರ ವರೆಗೆ ಅರ್ಜಿ ಸಲ್ಲಿಸಿ, ಶುಲ್ಕ ಪಾವತಿಸದೇ ಇರುವಂತಹ ಅಭ್ಯರ್ಥಿಗಳು ಮಾತ್ರ ದಿನಾಂಕ 05.06.2017 ರಿಂದ 10.06.2017 ರವರೆಗೆ ಗಣಕೀಕೃತ ಅಂಚೆ ಕಛೇರಿಗಳಲ್ಲಿ ಶುಲ್ಕ ಪಾವತಿಸಲು ಸೂಚಿಸಿದೆ.

ದಿನಾಂಕ 08-05-2015 ಮತ್ತು ದಿನಾಂಕ 02-03-2017 ರ ಅಧಿಸೂಚನೆಗೆ ಅರ್ಜಿ ಸಲ್ಲಿಸಿರುವ ಎಲ್ಲಾ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ವಿವರಗಳನ್ನು ಪ್ರಾಧಿಕಾರದ ಅಂತರ್ಜಾಲದಲ್ಲಿ ಪ್ರಕಟಿಸಿದೆ. ಅಭ್ಯರ್ಥಿಗಳು ಯಾವುದೇ ತಪ್ಪು ಮಾಹಿತಿ ನಮೂದಿಸಿದ್ದರೆ, ತಪ್ಪು ಮಾಹಿತಿಗಳನ್ನು ತಿದ್ದುಪಡಿ ಮಾಡಿಕೊಳ್ಳಲು ಮತ್ತು ಪರೀಕ್ಷಾ ಕೇಂದ್ರಗಳನ್ನು ಬದಲಾವಣೆ ಮಾಡಲು ದಿನಾಂಕ 11.06.2017 ರಿಂದ 20.06.2017 ರವರೆಗೆ ಅವಕಾಶ ನೀಡಲಾಗಿದೆ.

ದಿನಾಂಕ 08-05-2015ರ ಅಧಿಸೂಚನೆಯಲ್ಲಿ ಲಿಖಿತ ಪರೀಕ್ಷೆಯನ್ನು ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ನಡೆಸಲಾಗುವುದೆಂದು ಸೂಚಿಸಲಾಗಿತ್ತು. ಆದರೆ ದಿನಾಂಕ 02-03-2017ರ ಅಧಿಸೂಚನೆಯಲ್ಲಿ ಲಿಖಿತ ಪರೀಕ್ಷೆಯನ್ನು ಕೇವಲ 08(ಎಂಟು) ಜಿಲ್ಲೆಗಳಲ್ಲಿ ನಡೆಸಲಾಗುವುದೆಂದು ಸೂಚಿಸಲಾಗಿದೆ. ಆದ್ದರಿಂದ ದಿನಾಂಕ 08-05-2015ರಂದು ಅರ್ಜಿ ಸಲ್ಲಿಸಿರುವ ಎಲ್ಲಾ ಅಭ್ಯರ್ಥಿಗಳು ಲಿಖಿತ ಪರೀಕ್ಷೆಯನ್ನು ಬರೆಯಲು ನಿಗದಿಪಡಿಸಿದ ಈ ಜಿಲ್ಲೆಗಳಲ್ಲಿ ಯಾವುದಾದರೂ ಒಂದು ಜಿಲ್ಲೆಯನ್ನು ನಮೂದಿಸುವಂತೆ ಸೂಚಿಸಿದೆ.

ಕಾರ್ಯನಿರ್ವಾಹಕ ನಿರ್ದೇಶಕರು,
ಕರ್ನಾಟಕ ಪರೀಕ್ಷಾ ಪ್ರಾಧಿಕಾರ

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012.
18th Cross, Sampige Road, Malleshwaram, Bangalore – 560 012.
Phone: 080-2356 4583, 2336 1786, Fax: 080-2346 1576
Website : http://kea.kar.nic.in e-mail : keauthority-ka@nic.in